ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ,
ಶ್ರೀರಂಗಪಟ್ಟಣ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ **: 18/2025**

ಚಾ.ಸಾ. **:- 03**
ಪ್ರಾ.ಸಾ. **:- 03**

| | | |
|---|---|---|
| ಹೆಸರು | : | ರವಿ ಪ್ರಶಾಂತ್ |
| ತಂದೆಯ ಹೆಸರು | : | ಶಿವಣ್ಣ |
| ವಯಸ್ಸು | : | 51 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಪಾಲಹಳ್ಳಿ ಗ್ರಾಮ. |

ಪ್ರಮಾಣೀಕರಿಸಲಾದ ದಿನಾಂಕಃ- **21.07.2026.**

ಮುಖ್ಯ ವಿಚಾರಣೆ **:** ಮಾನ್ಯ ಸ.ಸ.ಅ.ರವರಿಂದ **:**

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಪೊಲೀಸರು ಅಪಘಾತಕ್ಕೆ ಸಂಬಂಧಿಸಿದಂತೆ ಸ್ಥಳ ಮಹಜರ್ ಮಾಡಿರುತ್ತಾರೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ನನ್ನ ಜೊತೆ ಬೇರೆ ಸಾಕ್ಷಿಗಳು ಸಹ ಹಾಜರಿದ್ದರು. ಸದರಿ ಮಹಜರ್ ಸಮಯದಲ್ಲಿ ಪೊಲೀಸರು ನಿಪಿ-3 ರಂತೆ ಕೃತ್ಯ ಸ್ಥಳದ ಕಚ್ಚಾ ನಕಾಶೆಯನ್ನು ತಯಾರು ಮಾಡಿರುತ್ತಾರೆ. ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ನಾನು ಅಪಘಾತ ಸ್ಥಳದ ಬಳಿ ಮಾಡಿರುತ್ತೇನೆ. ಮಹಜರ್ ಸಮಯದಲ್ಲಿ ಪೊಲೀಸರು ಫೋಟೋ ತೆಗೆದಿದ್ದು ಅದರಲ್ಲಿ ನನ್ನ ಮತ್ತು ಉಳಿದ ಸಾಕ್ಷಿದಾರರ ಭಾವಚಿತ್ರ ಇರುತ್ತದೆ. ಸದರಿ ಫೋಟೋವನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದೆ.

<u>ಪಾಟೀ ಸವಾಲು **:** ಆರೋಪಿ ಪರ ವಕೀಲರಿಂದ **:**</u>

ಅಪಘಾತ ಸ್ಥಳದ ಬಳಿ ನನಗೆ ಜಮೀನು ಇರುತ್ತದೆ. ಸದರಿ ರಸ್ತೆಯ ಒಂದು ಭಾಗದಲ್ಲಿ ನನಗೆ ಜಮೀನು ಇದೆ, ನನಗೆ ದಿಕ್ಕು ಹೇಳಲು ಗೊತ್ತಾಗುವುದಿಲ್ಲ. ನನಗೆ ಯಾವುದೇ ಜಮೀನು ಇಲ್ಲದಿದ್ದರೂ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಕಚ್ಚಾ ನಕಾಶೆಯಲ್ಲಿ ಸಹಿ ಮಾಡಿರುತ್ತೇನೆ. ನಾನು ಕಚ್ಚಾ ನಕಾಶೆಯಲ್ಲಿ ಸಹಿ ಮಾಡದಿದ್ದರೂ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತ ಸ್ಥಳದಲ್ಲಿ ರಕ್ತದ ಕಲೆಗಳು ಇರಲಿಲ್ಲ, ಅವರ ಚಪ್ಪಲಿಗಳು ಇದ್ದವು. ಪೊಲೀಸರು ಚಪ್ಪಲಿಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಯೇ ಎಂದರೆ ಗೊತ್ತಿಲ್ಲ. ನಾನು ಮೃತರ ಊರಿನವನು ಎಂದರೆ ಸರಿ. ಅಪಘಾತವಾದ ದಿವಸ ನಾನು ಸ್ಥಳಕ್ಕೆ ಹೋಗಿಲ್ಲ. ಮಹಜರನ್ನು ಓದಿ ಸಹಿ ಮಾಡಿರುತ್ತೇನೆ. ನಾನು ಸಹಿಯನ್ನು ಪೊಲೀಸ್ ಠಾಣೆಯ ಬಳಿ ಮಾಡಿರುತ್ತೇನೆ ಎಂದರೆ ಸುಳ್ಳು. ಮೃತರ ಕುಟುಂಬದವರು ನನಗೆ ಪರಿಚಯವಿರುವ ಕಾರಣ ಅವರಿಗೆ ವಿಮೆ ಪರಿಹಾರ ಕೊಡಿಸಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆ **:-** ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

ಪ್ರಧಾನ ಹಿರಿಯ ಸಿಜೆ ಮತ್ತು
ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.

**ಸಾಕ್ಷಿದಾರರ ಸಹಿ.**